AUGUST 17,2024

ALL INDIA RADIO- DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ವಿವೇಕಾದಿತ್ಯ ಕನಿಯಾಲ

<><><>

ಮುಖ್ಯಾಂಶಗಳು:

- ವೈದ್ಯೆಯ ಹತ್ಯೆ ಖಂಡಿಸಿ, ಇಂದು ವೈದ್ಯಕೀಯ ಸೇವೆ ಸ್ಥಗಿತ; ಆರೋಗ್ಯಾಕಾಂಕ್ಷಿಗಳ ಹಿತ ಕಾಯ್ದು, ಪ್ರತಿಭಟಿಸುವಂತೆ ವೈದ್ಯರಲ್ಲಿ, ದಿನೇಶ್ ಗುಂಡೂರಾವ್, ಮನವಿ.
- ಮುಂಗಾರು ಅತಿವೃಷ್ಟಿ ಹಾಗೂ ನಂತರದ ಪ್ರವಾಹದಿಂದ, 81 ಸಾವಿರದ 589 ಹೆಕ್ಟರ್ ಬೆಳೆ ಹಾನಿ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಬಾಹ್ಯಾಕಾಶ ವಿಜ್ಞಾನದ ಕುರಿತು, ಮಕ್ಕಳಲ್ಲಿ ಆಸಕ್ತಿ ಮೂಡಿಸಲು, 883 ವಸತಿ ಶಾಲೆಗಳಿಗೆ ಟೆಲಿಸ್ಕೋಪ್ ಒದಗಿಸಲು ಕ್ರಮ – ಎನ್.ಎಸ್.ಬೋಸರಾಜು.
- ಸರ್ಕಾರಿ ಶಾಲೆಗಳಿಗೆ ಸಮುದಾಯದಿಂದ, ಒಂದು ಸಾವಿರ ಕೋಟಿ ರೂಪಾಯಿ ಆರ್ಥಿಕ ನೆರವು, ಒದಗುವ ನಿರೀಕ್ಷೆ – ಮಧು ಬಂಗಾರಪ್ಪ.

<><><>

ಈಗ ವಾರ್ತೆಗಳ ವಿವರ

<><><>

ಕೋಲ್ಕೊತ್ತಾದ ಆಸ್ಪತ್ರೆಯಲ್ಲಿ, ತರಬೇತಿ ನಿರತ ವೈದ್ಯೆಯ ಮೇಲೆ ನಡೆದ, ಅತ್ಯಾಚಾರ ಹಾಗೂ ಹತ್ಯೆಯನ್ನು ಖಂಡಿಸಿ, ಇಂದು ಮತ್ತು ನಾಳೆ ಬೆಳಗ್ಗೆ ವರೆಗೆ, ರಾಷ್ಟ್ರ ವ್ಯಾಪಿ ವೈದ್ಯಕೀಯ ಸೇವೆಗಳನ್ನು ಬಂದ್ ಮಾಡುವುದಾಗಿ, ಭಾರತೀಯ ವೈದ್ಯಕೀಯ ಸಂಘ ಘೋಷಿಸಿದೆ.

ರಾಜ್ಯದ ಬಹುತೇಕ ಜಿಲ್ಲೆಗಳ, ಐ.ಎಂ.ಎ. ಘಟಕಗಳು, ವೈದ್ಯಕೀಯ ಸೇವೆಗಳನ್ನು ಸ್ಥಗಿತಗೊಳಿಸಿ ಪ್ರತಿಭಟಿಸುವಂತೆ, ಕರೆ ನೀಡಿರುವ ಹಿನ್ನೆಲೆ, ಇಂದು ಬೆಳಗ್ಗೆ 6 ಗಂಟೆಯಿಂದ ನಾಳೆ ಬೆಳಗಿನ 6 ಗಂಟೆಯ ವರೆಗೆ, ವೈದ್ಯಕೀಯ ಸೇವೆಗಳು ಸ್ಥಗಿತಗೊಳ್ಳುವ ಸಾಧ್ಯತೆ ಇದೆ.

ಹೊರ ರೋಗಿಗಳ ತಪಾಸಣೆ, ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸಾ ಸೇವೆಗಳು ಇಂದು ಪೂರ್ತಿ ದಿನ ಮತ್ತು ನಾಳೆ ಬೆಳಗ್ಗೆ 6 ಗಂಟೆಯ ವರೆಗೆ ದೊರಕುವುದಿಲ್ಲ ಎಂದು, ಐ.ಎಂ.ಎ. ಜಿಲ್ಲಾ ಘಟಕದ ಅಧ್ಯಕ್ಷರುಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಭಾರತೀಯ ವೈದ್ಯಕೀಯ ಸಂಘದ, ಕೊಡಗು ಘಟಕದ ಅಧ್ಯಕ್ಷ  ಡಾಕ್ಟರ್ ಶ್ಯಾಮ್ ಅಪ್ಪಣ್ಣ ಮತ್ತು ಪ್ರಧಾನ ಕಾರ್ಯದರ್ಶಿ ಡಾಕ್ಟರ್ ಸಿ.ಆರ್. ಪ್ರಶಾಂತ್  ವೈದ್ಯರ ಈ ಮು ್ಕರಕ್ಕೆ ಸಾರ್ವಜನಿಕರೂ ಸಹಕಾರ ನೀಡುವಂತೆ, ಮನವಿ ಮಾಡಿದ್ದಾರೆ.

<><><>

ಭಾರತೀಯ ವೈದ್ಯಕೀಯ ಸಂಘದ, ಧಾರವಾಡ ಘಟಕದ ಅಧ್ಯಕ್ಷ ಡಾಕ್ಟರ್ ಸತೀಶ ಇರಕಲ್ ಹಾಗೂ ಕಾರ್ಯದರ್ಶಿ ಡಾಕ್ಟರ್ ಕಿರಣ ಕುಲಕರ್ಣಿ, ಪ್ರಕಟಣೆ ಹೊರಡಿಸಿದ್ದು, ಇಂದು ಮತ್ತು ನಾಳೆ ಧಾರವಾಡದಲ್ಲಿ ಹೊರ ರೋಗಿ ವಿಭಾಗಗಳಲ್ಲಿ ವೈದ್ಯರು ಕಾರ್ಯನಿರ್ವಹಿಸದೇ, ಮುಷ್ಕರದಲ್ಲಿ ಪಾಲ್ಗೊಳ್ಳುವರು ಎಂದು ತಿಳಿಸಿದ್ದಾರೆ.

<><><>

ಜನ ಸಾಮಾನ್ಯರಿಗೆ ತೊಂದರೆಯಾಗದಂತೆ, ಆರೋಗ್ಯ ಸೇವೆಗಳನ್ನು ಸ್ಥಗಿತಗೊಳಿಸದೇ ಪ್ರತಿಭಟನೆ ನಡೆಸುವಂತೆ, ವೈದ್ಯರು ಹಾಗೂ ವೈದ್ಯಕೀಯ ಸಂಘದ ಪದಾಧಿಕಾರಿಗಳಿಗೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ಮನವಿ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ ಸಚಿವರು, ವೈದ್ಯೆಯ ಹತ್ಯೆ ಆಘಾತಕಾರಿ. ವೈದ್ಯರ ಭಾವನೆಗಳಿಗೆ ಸರ್ಕಾರ ಸಹಾನುಭೂತಿ ವ್ಯಕ್ತ ಪಡಿಸುತ್ತದೆ. ಅಪರಾಧಿಗಳಿಗೆ ಕಠಿಣ ಶಿಕ್ಷೆ ಒದಗಿ, ಇಂತಹ ಘಟನೆ ಮರುಕಳಿಸದಂತೆ ಕಟ್ಟೆಚ್ಚರ ವಹಿಸಬೇಕಿದೆ. ಸಮಾಜ ಸಹ ಸಹೃದಯತೆಯಿಂದ ಸ್ಪಂದಿಸಬೇಕು, ಎಂದರು.

ಖಾಸಗಿ ಆಸ್ಪತ್ರೆಯ ವೈದ್ಯರು ಮು ್ಕರಕ್ಕೆ ಕರೆ ನೀಡಿರುವ ಹಿನ್ನೆಲೆ, ಪ್ರಧಾನ ಕಾರ್ಯದರ್ಶಿ ಅವರೊಡನೆ ಚರ್ಚಿಸಿದ್ದು, ವೈದ್ಯಕೀಯ ಸಂಘದ ಪದಾಧಿಕಾರಿಗಳ ಜೊತೆ ಸಮಾಲೋಚಿಸಿ, ಶ್ರೀ ಸಾಮಾನ್ಯರ ಚಿಕಿತ್ಸೆಗೆ ತೊಂದರೆಯಾಗದಂತೆ, ಪ್ರತಿಭಟನೆ ನಡೆಸಲು ಮನವೊಲಿಸಲಾಗುವುದು ಎಂದರು.

<><><>

ಬದಲಾಗುತ್ತಿರುವ ಕಾಲಘಟ್ಟದಲ್ಲಿ, ವೈದ್ಯಕೀಯ ಶಿಕ್ಷಣಕ್ಕೆ ಸಾಕ ್ಟ ಮಹತ್ವ ಬಂದಿದೆ. ಬಹಳ ್ಟ ನಿರೀಕ್ಷೆಯೊಂದಿಗೆ, ವೈದ್ಯಕೀಯ ಶಿಕ್ಷಣಕ್ಕೆ ಪ್ರತಿಭಾವಂತರು ಪ್ರವೇಶ ಪಡೆಯುತ್ತಿದ್ದಾರೆ. ಗುಣಮಟ್ಟದ ಬೋಧನೆಗೆ ಆದ್ಯತೆ ನೀಡಿ, ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಪ್ರಾಧ್ಯಾಪಕರು, ಮಾದರಿಯಾಗಬೇಕು ಎಂದು,  ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಶರಣಪ್ರಕಾಶ ಪಾಟೀಲ, ಸೂಚಿಸಿದ್ದಾರೆ.

ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆ – ಕಿಮ್ಸ್ ಸಭಾಂಗಣದಲ್ಲಿ ಸಚಿವರು, ಸಭೆ ನಡೆಸಿದರು.

ಕೊಪ್ಪಳ ಜಿಲ್ಲೆ ಬಯಲು ಸೀಮೆಯ ನೆಲ. ಇಲ್ಲಿನ ಜನರ ಸಾಮಾಜಿಕ, ಆರ್ಥಿಕ ಪರಿಸ್ಥಿತಿ ಸುಧಾರಿಸಬೇಕಿದೆ. ಮುಖ್ಯವಾಗಿ ಇಲ್ಲಿನ ಜನತೆಗೆ ಉತ್ತಮ ಆರೋಗ್ಯ ಸೌಕರ್ಯ ದೊರೆಯಬೇಕಿದೆ. ಕೊಪ್ಪಳ ವೈದ್ಯಕೀಯ ಶಿಕ್ಷಣ ಸಂಸ್ಥೆಯ ಬಗ್ಗೆ ಜನ ಸಾಕ ್ಟ ಭರವಸೆ ಹೊಂದಿದ್ದಾರೆ ಎಂದರು.

ಕಿಮ್ಸ್ ಸಂಸ್ಥೆಯ ನಿರ್ದೇಶಕ ವಿಶ್ವನಾಥ ಇಟಗಿ ಮಾತನಾಡಿ, ಕೊಪ್ಪಳ ವೈದ್ಯಕೀಯ ಶಿಕ್ಷಣ ಸಂಸ್ಥೆಗೆ ಒಟ್ಟು 81 ಹುದ್ದೆಗಳು ಮಂಜೂರಾಗಿವೆ. ಆ ಪೈಕಿ 32 ಹುದ್ದೆಗಳು ಖಾಲಿ ಇವೆ ಎಂದು, ಸಚಿವರಿಗೆ ಮಾಹಿತಿ ನೀಡಿದರು.

<><><>

ಮುಂಗಾರು ಅವಧಿಯಲ್ಲಿ ರಾಜ್ಯಾದ್ಯಂತ, ಅತಿವೃಷ್ಟಿ ಹಾಗೂ ನಂತರದ ಪ್ರವಾಹ ಪರಿಸ್ಥಿತಿ ಕುರಿತು, ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಂಗಳೂರಿನಲ್ಲಿ ಉನ್ನತ ಮಟ್ಟದ ಸಭೆ ನಡೆಸಿದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿಯವರು, ಮುಂದಿನ ನಾಲ್ಕು ವಾರಗಳಲ್ಲಿ ರಾಜ್ಯದ ದಕ್ಷಿಣ ಒಳನಾಡು, ಉತ್ತರ ಒಳನಾಡು, ಕರಾವಳಿ ಹಾಗೂ ಮಲೆನಾಡಿನಲ್ಲಿ ವಾಡಿಕೆಗಿಂತ ಅಧಿಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ, ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ 82 ಲಕ್ಷ ಹೆಕ್ಟರ್ ಬಿತ್ತನೆ ಗುರಿ ಹೊಂದಲಾಗಿತ್ತು. 70 ಲಕ್ಷ ಹೆಕ್ಟರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. ಮಳೆಯಿಂದಾಗಿ 81 ಸಾವಿರದ 589 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಅಂತಿಮ ವರದಿ ಬಂದ ಕೂಡಲೇ ಪರಿಹಾರ ವಿತರಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ನುಡಿದರು.

<><><>

ವಿಜಯನಗರ ಜಿಲ್ಲೆ, ಹೊಸಪೇಟೆಯ ತುಂಗಭದ್ರಾ ಅಣೆಕಟ್ಟೆಯ 19 ನೇ ಕ್ರಸ್ಟ್ ಗೇಟ್ ಇದ್ದ ಸ್ಥಳದಲ್ಲಿ, ಧುಮ್ಮಿಕ್ಕುತ್ತಿರುವ ನೀರಿನಲ್ಲೇ ತಾತ್ಕಾಲಿಕ ಗೇಟ್ ಫಲಕವನ್ನು ಇಳಿಸಿ, ಜೋಡಿಸುವ ಯತ್ನ ನಿನ್ನೆ ರಾತ್ರಿ ನಡೆಯಿತು. ಇದರಿಂದ 25 ಟಿ.ಎಂ.ಸಿ. ಅಡಿ ನೀರು, ನದಿ ಪಾಲಾಗುವುದು ತಪ್ಪಿದೆ.

ಎರಡು ಬೃಹತ್ ಕ್ರೇನ್ ಗಳ ನೆರವಿನಿಂದ, 4 ಅಡಿ ಎತ್ತರದ ಸುಮಾರು 13 ಟನ್ ತೂಕದ ತಡೆ ಫಲಕವನ್ನು ನೀರಿಗೆ ಇಳಿಸಿ, ಪರಿಶೀಲಿಸಲಾಯಿತು. ರಭಸವಾಗಿ ನೀರು ಹರಿದರೂ ಗೇಟ್ ಹೊಯ್ದಾಡುತ್ತಿಲ್ಲ ಎಂಬುದು ಖಚಿತವಾದ ನಂತರ, ರಾತ್ರಿ 8.35 ಕ್ಕೆ ನೀರಿನಲ್ಲಿ ಗೇಟ್ ಇಳಿಸಲಾಯಿತು ಎಂದು, ಕೊಪ್ಪಳ ಜಿಲ್ಲೆ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಮಾಹಿತಿ ನೀಡಿದರು.

ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲ ಅವರು ತುಂಗಭದ್ರಾ ಅಣೆಕಟ್ಟೆಗೆ ಭೇಟಿ ನೀಡಿ, ವೀಕ್ಷಿಸಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಕೇಂದ್ರ–ಇಸ್ರೋ, ಆಂಧ್ರ ಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ, ಇ.ಓ.ಎಸ್–08 ಉಪಗ್ರಹವನ್ನು ಹೊತ್ತ, ಎಸ್.ಎಸ್.ಎಲ್.ವಿ. – ಡಿ 3 ರಾಕೆಟ್ ಅನ್ನು, ಉಡಾವಣೆ ಮಾಡಿದೆ.

ಇ.ಓ.ಎಸ್–08 ಉಪಗ್ರಹ, ಪರಿಸರ ಪರಿವೀಕ್ಷಣೆಯನ್ನು ಇನ್ನ ್ಟ ಸಮರ್ಥ ಹಾಗೂ ಪ್ರಾಕೃತಿಕ ವಿಕೋಪ ನಿರ್ವಹಣೆಗೆ ನೆರವಾಗಲು ಬಳಕೆಯಾಗಲಿದೆ. ಜ್ವಾಲಾಮುಖಿಗಳ ಮೇಲ್ವಿಚಾರಣೆ ಮತ್ತು ಗಗನಯಾನ ಯೋಜನೆಗೆ ಸಹ ಸಹಕಾರಿಯಾಗಲಿದೆ ಎಂದು ಇಸ್ರೋ ತಿಳಿಸಿದೆ.

<><><>

ವಿಜ್ಞಾನ ಮತ್ತು ತಂತ್ರಜ್ಞಾನದ ಬಗ್ಗೆ, ಮಕ್ಕಳು ಹಾಗೂ ಸಾರ್ವಜನಿಕರಲ್ಲಿ ಆಸಕ್ತಿ ಮತ್ತು ತಿಳಿವಳಿಕೆ ಮೂಡಿಸಲು, ಈ ಬಾರಿಯ ಆಯವ್ಯಯದಲ್ಲಿ, 883 ವಸತಿ ಶಾಲೆಗಳಿಗೆ ಟೆಲಿಸ್ಕೋಪ್ ಒದಗಿಸಲು ಅಗತ್ಯ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಬೋಸರಾಜು ತಿಳಿಸಿದ್ದಾರೆ.

ಬೆಂಗಳೂರಿನ ಜವಹರಲಾಲ್ ನೆಹರು ತಾರಾಲಯಕ್ಕೆ ಭೇಟಿ ನೀಡಿದ ಸಚಿವರು, ತಾರಾಲಯದ ಆಧುನೀಕರಣಕ್ಕೆ ಸೂಕ್ತ ಪ್ರಸ್ತಾವ ಸಲ್ಲಿಸುವಂತೆ, ನಿರ್ದೇಶಕರಿಗೆ ಸೂಚಿಸಿದರು.

ಬಳಿಕ ಮಾತನಾಡಿದ ಸಚಿವರು, ಟೆಲಿಸ್ಕೋಪ್‌ಗಳನ್ನು ಖರೀದಿಸಲು ಈಗಾಗಲೇ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ. ನೆಹರು ತಾರಾಲಯದ ಸಹಯೋಗದಲ್ಲಿ ತರಬೇತಿ ಶಿಬಿರಗಳನ್ನು ಆಯೋಜಿಸಲಾಗುವುದು ಎಂದರು.

<><><>

ಮುಂದಿನ ಒಂದು ವರ್ಷದ ಒಳಗಾಗಿ ಸಮುದಾಯದಿಂದ, ಒಂದು ಸಾವಿರ ಕೋಟಿ ರೂಪಾಯಿ ಆರ್ಥಿಕ ನೆರವು, ಸರ್ಕಾರಿ ಶಾಲೆಗಳಿಗೆ ಒದಗುವ ನಿರೀಕ್ಷೆ ಇದೆ ಎಂದು, ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಶಿವಮೊಗ್ಗ ಜಿಲ್ಲೆ ಸೊರಬ ತಾಲೂಕು, ಕುಬಟೂರಿನ ಸರ್ಕಾರಿ ಹಿರಿಯ ಮಾದರಿ ಪ್ರಾಥಮಿಕ ಶಾಲೆಗೆ, ಹತ್ತು ಲಕ್ಷ ರೂಪಾಯಿಗಳ ಪಾಠೋಪಕರಣ ಮತ್ತು ಪೀಠೋಪಕರಣಗಳನ್ನು ಸಚಿವರು, ಶಾಲೆಗೆ ಕೊಡುಗೆಯಾಗಿ ನೀಡಿದರು.

ಬಳಿಕ 'ನಮ್ಮ ಶಾಲೆ, ನಮ್ಮ ಜವಾಬ್ದಾರಿ' ಕಾರ್ಯಕ್ರಮ ಉದ್ಘಾಟಿಸಿ, ಅವರು ಮಾತನಾಡಿದರು.

ಮುಖ್ಯಮಂತ್ರಿಗಳಾಗಿದ್ದ ದಿವಂಗತ ಎಸ್.ಬಂಗಾರಪ್ಪನವರು ಪ್ರಾಥಮಿಕ ವಿದ್ಯಾಭ್ಯಾಸ ಮಾಡಿದ, ಈ ಶಾಲೆಯ ಸರ್ವಾಂಗೀಣ ವಿಕಾಸಕ್ಕೆ ತಾವು ಬದ್ಧ ಎಂದರು.

ರಾಜ್ಯದಲ್ಲಿ 46 ಸಾವಿರ ಸರ್ಕಾರಿ ಶಾಲೆಗಳಿದ್ದು, ಈ ಎಲ್ಲ ಶಾಲೆಗಳನ್ನು ಸರ್ಕಾರದ ಅನುದಾನದಿಂದಲೇ ಅಭಿವೃದ್ಧಿಪಡಿಸಲು ಸಾಧ್ಯವಾಗದು. ಆಯಾ ಶಾಲೆಗಳಲ್ಲಿ ಓದಿರುವ ಹಿರಿಯ ವಿದ್ಯಾರ್ಥಿಗಳು, ತಮ್ಮ ಶಾಲೆಯ ಅಭಿವೃದ್ಧಿಗೆ ಕೈಲಾದಷ್ಟು ಸಹಾಯ ಒದಗಿಸುವಂತೆ, ತಾವು ಮನವಿ ಮಾಡಿದ್ದಾಗಿ ಸಚಿವರು ಹೇಳಿದರು.

<><><>

ಅಂಕೋಲಾ ತಾಲೂಕಿನ ಶಿರೂರಿನಲ್ಲಿ ಗುಡ್ಡ ಕುಸಿದು, ದುರ್ಘಟನೆಯಲ್ಲಿ ಕಾಣೆಯಾದ ಮೂವರ ಪತ್ತೆಗೆ ಮತ್ತು ಗಂಗಾವಳಿ ನದಿಯಲ್ಲಿ ಮುಳುಗಿದ ಲಾರಿ ಹೊರ ತೆಗೆಯಲು, ನಿನ್ನೆ ಕಾರ್ಯಾಚರಣೆ ಆರಂಭಿಸಲಾಗಿದೆ. ನದಿಗೆ ಉರುಳಿದ್ದ ಗ್ಯಾಸ್ ಟ್ಯಾಂಕರ್ ವಾಹನದ ಕೆಲ ಅವಶೇಷಗಳು ಸಿಕ್ಕಿವೆ.

ಮುಳುಗು ತಜ್ಞ ಈಶ್ವರ ಮಲ್ಪೆ ಮತ್ತು ತಂಡ, ನೌಕಾದಳದ ಮುಳುಗು ತಜ್ಞರು, ರಾಷ್ಟ್ರೀಯ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಪಡೆ ಸದಸ್ಯರು, ಸ್ಥಳೀಯ ಮೀನುಗಾರರು ಸೇರಿ ಕಾರ್ಯಾಚರಣೆ ನಡೆಸಿದ್ದಾರೆ.

ಯಲ್ಲಾಪುರ ಭಾಗದಲ್ಲಿ ಮಳೆ ಸುರಿದ ಪರಿಣಾಮ ಗಂಗಾವಳಿ ನದಿಯಲ್ಲಿ ನೀರಿನ ಮಟ್ಟ ರಭಸ ಪಡೆದಿದೆ. ನದಿಯಲ್ಲಿ ಬಿದ್ದ ಮರಗಳಿಗೆ ಕಬ್ಬಿಣದ ಹಗ್ಗ ಕಟ್ಟಲಾಗಿದೆ. ಕ್ರೇನ್‌ನಿಂದ ಅವುಗಳನ್ನು ಎಳೆದು, ದಡಕ್ಕೆ ತರಲಾಗುವುದು. ನಂತರ ಮುಂದಿನ ಕಾರ್ಯಾಚರಣೆ ಮುಂದುವರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ.

<><><>

ಮಂಡ್ಯದಲ್ಲಿ ಮೂರನೇ ಹೆಣ್ಣು ಭ್ರೂಣ ಹತ್ಯೆ ಪ್ರಕರಣ ಬೆಳಕಿಗೆ ಬಂದಿದೆ. ಜಿಲ್ಲಾ ಆರೋಗ್ಯ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿ, ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ, ಜಿಲ್ಲಾ ಆರೋಗ್ಯಾಧಿಕಾರಿ, ಡಾಕ್ಟರ್ ಮೋಹನ್, ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಮಾವಿನಕೆರೆ ಗ್ರಾಮದ ತೋಟದ ಮನೆಯಲ್ಲಿ ಘಟನೆ ಬೆಳಕಿಗೆ ಬಂದಿದ್ದು, ಎರಡು ತಿಂಗಳಿನಿಂದ ರೂಪುರೇ ೆ ಸಿದ್ಧಪಡಿಸಿ, ಖಚಿತ ಮಾಹಿತಿಯ ಆಧಾರದ ಮೇಲೆ, ದಾಳಿ ನಡೆಸಿದ್ದಾಗಿ ತಿಳಿಸಿದರು.

<><><>

ಬರುವ ಡಿಸೆಂಬರ್ 20, 21 ಹಾಗೂ 22 ರಂದು, ಮಂಡ್ಯದಲ್ಲಿ, ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳವನ್ನು, ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು, ಸಿದ್ಧತೆ ಪ್ರಾರಂಭಿಸುವಂತೆ, ಜಿಲ್ಲಾಡಳಿತಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೂಚಿಸಿದ್ದಾರೆ.

ಮಂಡ್ಯ ನಗರದ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದ್ದ, ಸಮ್ಮೇಳನದ ವಿವಿಧ ಸಮಿತಿಗಳ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಸಮ್ಮೇಳನದ ಸುವ್ಯವಸ್ಥಿತ ನಿರ್ವಹಣೆಗಾಗಿ, ಒಟ್ಟು 28 ಸಮಿತಿಗಳನ್ನು ರಚಿಸಲಾಗಿದೆ. ಪರಸ್ಪರ ಸಮನ್ವಯ ಹಾಗೂ ಸಂಯೋಜನೆಯೊಂದಿಗೆ, ಕರ್ತವ್ಯ ನಿಭಾಯಿಸಿ ಮಾದರಿ ನುಡಿ ಹಬ್ಬವಾಗಿಸಲು, ಸಚಿವರು ಮನವಿ ಮಾಡಿದರು.

ಕನ್ನಡ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಮಹೇಶ್ ಜೋಶಿ, ಪ್ರಧಾನ ಪೋ ಕ ನಿರ್ಮಲಾನಂದನಾಥ ಸ್ವಾಮೀಜಿ ಸೇರಿದಂತೆ, ಹಲವು ಗಣ್ಯರು ಸಭೆಯಲ್ಲಿ ಭಾಗವಹಿಸಿದ್ದರು.

<><><>

70ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗೆ, ಕಾಂತಾರ ಚಿತ್ರದ ನಟನೆಗಾಗಿ ರಿ ಬ್ ಶೆಟ್ಟಿ, ಕನ್ನಡದ ಅತ್ಯುತ್ತಮ ಚಿತ್ರವಾಗಿ ಕೆ.ಜಿ.ಎಫ್– 2, ಮಧ್ಯಂತರ ಚಿತ್ರದ ಸಂಕಲನಕ್ಕಾಗಿ ಸುರೇಶ್ ಅರಸ್, ಅತ್ಯುತ್ತಮ ಚೊಚ್ಚಲ ನಿರ್ದೇಶಕರಾಗಿ, ಮಧ್ಯಂತರ ಕಿರುಚಿತ್ರದ ನಿರ್ದೇಶಕ ಬಸ್ತಿ ದಿನೇಶ್ ಶೆಣೈ, ಭಾಜನರಾಗಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೇಂದ್ರ ನವೀಕರಿಸಬಹುದಾದ ಇಂಧನ ಮೂಲಗಳ ಖಾತೆ ಸಚಿವ ಪ್ರಲ್ಹಾದ ಜೋಶಿ, ಪ್ರಶಸ್ತಿ ವಿಜೇತರೆಲ್ಲರಿಗೂ ಅಭಿನಂದನೆ ಸಲ್ಲಿಸಿದ್ದು, ಈ ಸಾಧನೆ ಚಿತ್ರರಂಗದ ಇತರೆ ಎಲ್ಲ ಕಲಾವಿದರಿಗೂ ಪ್ರೇರಣೆ ನೀಡಲಿ ಎಂದು ಆಶಿಸಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

- ವೈದ್ಯೆಯ ಹತ್ಯೆ ಖಂಡಿಸಿ, ಇಂದು ವೈದ್ಯಕೀಯ ಸೇವೆ ಸ್ಥಗಿತ; ಆರೋಗ್ಯಾಕಾಂಕ್ಷಿಗಳ ಹಿತ ಕಾಯ್ದು, ಪ್ರತಿಭಟಿಸುವಂತೆ ವೈದ್ಯರಲ್ಲಿ, ದಿನೇಶ್ ಗುಂಡೂರಾವ್, ಮನವಿ.
- ಮುಂಗಾರು ಅತಿವೃಷ್ಟಿ ಹಾಗೂ ನಂತರದ ಪ್ರವಾಹದಿಂದ, 81 ಸಾವಿರದ 589 ಹೆಕ್ಟರ್ ಬೆಳೆ ಹಾನಿ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಬಾಹ್ಯಾಕಾಶ ವಿಜ್ಞಾನದ ಕುರಿತು, ಮಕ್ಕಳಲ್ಲಿ ಆಸಕ್ತಿ ಮೂಡಿಸಲು, 883 ವಸತಿ ಶಾಲೆಗಳಿಗೆ ಟೆಲಿಸ್ಕೋಪ್ ಒದಗಿಸಲು ಕ್ರಮ – ಎನ್.ಎಸ್.ಬೋಸರಾಜು.

- ಸರ್ಕಾರಿ ಶಾಲೆಗಳಿಗೆ ಸಮುದಾಯದಿಂದ, ಒಂದು ಸಾವಿರ ಕೋಟಿ ರೂಪಾಯಿ ಆರ್ಥಿಕ ನೆರವು, ಒದಗುವ ನಿರೀಕ್ಷೆ – ಮಧು ಬಂಗಾರಪ್ಪ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>